23-09-2021

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	**1362**
ಮಾನ್ಯ ಸದಸ್ಯರ ಹೆಸರು	ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	23.09.2021
ಉತ್ತರಿಸಬೇಕಾದವರು	ಅಬಕಾರಿ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಜಿಲ್ಲೆಯಲ್ಲಿ ಕಳ್ಳಭಟ್ಟಿ ಸಾರಾಯಿ ತಯಾರಿಕೆ ಹೆಚ್ಚಾಗಿರುವುದು ಹಾಗೂ ನೆರೆಯ ರಾಜ್ಯಗಳಿಂದ ರಾಜ್ಯಕ್ಕೆ ಮದ್ಯವು ಕಳ್ಳ ಸಾಗಾಣಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಕಳ್ಳಭಟ್ಟಿ ಸಾರಾಯಿ ತಯಾರಿಕಾ ಕೇಂದ್ರಗಳ ಮೇಲೆ ದಾಳಿ ಮಾಡಿ ಎಷ್ಟು ಪ್ರಕರಣಗಳನ್ನು ದಾಖಲಿಸಿ ಅಪರಾಧಗಳನ್ನು ಬಂಧಿಸಲಾಗಿದೆ; ಮತ್ತು ಶಿಕ್ಷೆಗೆ ಒಳಪಡಿಸಲಾಗಿದೆಯೇ; (ವಿವರ ನೀಡುವುದು)	ಬೀದರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಕಳ್ಳಭಟ್ಟಿ ಕೇಂದ್ರಗಳ ಮೇಲೆ ನಡೆಸಿದ ದಾಳಿ, ದಾಖಲಿಸಿದ ಪ್ರಕರಣಗಳ ಸಂಖ್ಯೆ, ಹಾಗೂ ದಸ್ತಗಿರಿಗೊಳಪಡಿಸಲಾದ ಆರೋಪಿತರ ಸಂಖ್ಯೆಯ ವಿವರ ಕೆಳಕಂಡಂತಿದೆ; (see table below) ಕಳೆದ ಮೂರು ವರ್ಷಗಳಲ್ಲಿ ದಾಖಲಿಸಲಾದ ಎಲ್ಲಾ ಪ್ರಕರಣಗಳು ನ್ಯಾಯಾಲಯದಲ್ಲಿ ಇನ್ನೂ ವಿಚಾರಣಾ ಹಂತದಲ್ಲಿದೆ.

ಕ್ರ ಸಂ	ಅಬಕಾರಿ ವರ್ಷ	ನಡೆಸಿದ ದಾಳಿ ಸಂಖ್ಯೆ	ದಾಖಲಿಸಿದ ಪ್ರಕರಣಗಳ ಸಂಖ್ಯೆ	ದಸ್ತಗಿರಿಗೊಳಪಡಿಸಿದ ಆರೋಪಿಗಳ ಸಂಖ್ಯೆ
1	2018-19	212	11	05
2	2019-20	453	59	05
3	2020-21	423	30	15

ಇ) ನೆರೆಯ ರಾಜ್ಯಗಳಿಂದ ಮದ್ಯ ಕಳ್ಳ ಸಾಗಾಣಿಕೆಯ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ; ಮತ್ತು ಎಷ್ಟು ಅಪರಾಧಗಳಿಗೆ ಶಿಕ್ಷೆ ವಿಧಿಸಲಾಗಿದೆ; (ವಿವರ ನೀಡುವುದು)

ಬೀದರ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ನೆರೆ ರಾಜ್ಯಗಳಿಂದ ಅಕ್ರಮ ಮದ್ಯ ಸಾಗಾಣಿಕೆ ಸಂಬಂಧ ದಾಖಲಿಸಿದ ಪ್ರಕರಣಗಳ ಸಂಖ್ಯೆ ಹಾಗೂ ದಸ್ತಗಿರಿಗೊಳಪಡಿಸಲಾದ ಆರೋಪಿತರ ಸಂಖ್ಯೆಗಳ ವಿವರ ಕೆಳಕಂಡಂತಿದೆ;

ಕ್ರ ಸಂ	ಅಬಕಾರಿ ವರ್ಷ	ದಾಖಲಿಸಿದ ಪ್ರಕರಣಗಳ ಸಂಖ್ಯೆ	ದಸ್ತಗಿರಿಗೊಳಪಡಿಸಿದ ಆರೋಪಿಗಳ ಸಂಖ್ಯೆ
1	2018-19	0	0
2	2019-20	3	3
3	2020-21	4	5

ಕಳೆದ ಮೂರು ವರ್ಷಗಳಲ್ಲಿ ದಾಖಲಿಸಲಾದ ಎಲ್ಲಾ ಪ್ರಕರಣಗಳು ನ್ಯಾಯಾಲಯದಲ್ಲಿ ಇನ್ನೂ ವಿಚಾರಣಾ ಹಂತದಲ್ಲಿದೆ.

ಈ) ಕಳ್ಳಭಟ್ಟಿ ಮಾರಾಟ ಕೇಂದ್ರಗಳನ್ನು ಹಾಗೂ ಮದ್ಯ ಕಳ್ಳ ಸಾಗಣಿಕೆಯನ್ನು ತಡೆಗಟ್ಟಲು ಸರ್ಕಾರವು ಯಾವ ಯಾವ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದೆ? (ಸಂಪೂರ್ಣ ಮಾಹಿತಿ ನೀಡುವುದು)

ಕಳ್ಳಭಟ್ಟಿ ಕೇಂದ್ರಗಳ ಮೇಲೆ ವ್ಯವಸ್ಥಿತ ಅಬಕಾರಿ ದಾಳಿ ನಡೆಸಿ ಕಳ್ಳಭಟ್ಟಿ ತಯಾರಿಕೆ ಪತ್ತೆ ಹಚ್ಚುವ ಹಾಗೂ ತಡೆಗಟ್ಟುವ ನಿಟ್ಟಿನಲ್ಲಿ ನಿರಂತರ ಕಾರ್ಯಾಚರಣೆ ಹಮ್ಮಿಕೊಳ್ಳಲಾಗಿದೆ. ಕಳ್ಳಭಟ್ಟಿ ತಯಾರಿಕೆಗೆ ಬಳಸಲ್ಪಡುವ ಕಚ್ಚಾವಸ್ತುಗಳನ್ನು ಒದಗಿಸುವವರ ಮೇಲೂ ನಿಗಾ ಇಡಲಾಗಿದ್ದು, ಹಿಂದಿನ ಪ್ರಕರಣಗಳ ಪೂರ್ವಾಪರಾಧಿಗಳ ಚಲನ-ವಲನಗಳ ಬಗ್ಗೆ ಅಬಕಾರಿ ಗಸ್ತಿನ ವೇಳೆಯಲ್ಲಿ ನಿಗಾ ಇಡಲಾಗಿದೆ. ಸರ್ಕಾರಿ/ಅರಣ್ಯ ಪ್ರದೇಶಗಳಲ್ಲಿ ಕಳ್ಳಭಟ್ಟಿ ತಯಾರಿಸಿದ ಪ್ರಕರಣಗಳಿಗೆ ಸಂಬಂಧಿಸಿದಂತೆ ಸದರಿ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ, ಅಕ್ರಮವೆಸಗದಂತೆ ಕ್ರಮ ಜರುಗಿಸಲಾಗಿದೆ.

ಹಾಗೆಯೇ ಹೊರ ರಾಜ್ಯಗಳಿಂದ ಅಕ್ರಮವಾಗಿ ಮದ್ಯ ಸಾಗಾಣಿಕೆ ತಡೆಗಟ್ಟಲು ನಿಯಮಿತವಾಗಿ ರಸ್ತೆಗಾವಲು ಮತ್ತು ರಸ್ತೆ-ಗಸ್ತು ಕೈಗೊಂಡು ವಾಹನಗಳ ಹಾಗೂ ವ್ಯಕ್ತಿಗಳ ತಪಾಸಣೆಯನ್ನು ಕೈಗೊಳ್ಳಲಾಗುತ್ತಿದೆ. ನೆರೆಯ ರಾಜ್ಯಗಳ ಅಬಕಾರಿ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಪೂರ್ವಾಪರಾಧಿಗಳ ಬಗ್ಗೆ ಮಾಹಿತಿ ವಿನಿಮಯ ಮಾಡಿ ಜಂಟಿ ಕಾರ್ಯಾಚರಣೆಯನ್ನು ನಡೆಸಲಾಗುತ್ತಿದೆ.

ಆಇ 108 ಇಎಲ್‌ಕ್ಯೂ 2021

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು